**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಕರ್ನಾಟಕ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳು ಹಾಗೂ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರೌಢಶಾಲಾ ವಿಭಾಗದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (School Development Moniterng Committee ಎಸ್.ಡಿ.ಎಂ.ಸಿ) ರಚಿಸುವ ಕುರಿತು.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ: ಇಡಿ 01 ಪಿಬಿಎಸ್ 2001, ದಿನಾಂಕ:28/04/2001.,
2. ಸರ್ಕಾರದ ಆದೇಶ ಸಂಖ್ಯೆ: ಇಡಿ 01 ಪಿಬಿಎಸ್ 2001, ದಿನಾಂಕ:16/08/2001.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 249 ಎಲ್‌ಬಿಪಿ 2007, ದಿನಾಂಕ:11/03/2008.
4. ಸರ್ಕಾರದ ಆದೇಶ ಸಂಖ್ಯೆ:105 ಎಸ್‌ಓಹೆಚ್ 2008, ದಿನಾಂಕ:28/07/2009.
5. ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:80352/2009, ದಿ:05/02/2009ರಲ್ಲಿ ನೀಡಿದ ತೀರ್ಪು.
6. ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ಇವರು ಏಕ ಕಡತದಲ್ಲಿ ಸಲ್ಲಿಸಿರುವ ದಿನಾಂಕ:06/01/2019ರ ಪ್ರಸ್ತಾವನೆ.

** ** **

16 JAN 2021

**ಪ್ರಸ್ತಾವನೆ:**

ಕರ್ನಾಟಕ ರಾಜ್ಯದಲ್ಲಿ ಶಾಲಾ ಶಿಕ್ಷಣದಲ್ಲಿ ಗುಣಾತ್ಮಕ ಬದಲಾವಣೆ ತರಲು ಹಾಗೂ ಶಾಲಾ ಆಡಳಿತದಲ್ಲಿ ಸಮುದಾಯದ ಸಕ್ರಿಯ ಪಾತ್ರವನ್ನು ಖಚಿತಪಡಿಸಲು ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಾಲಾ ಅಬಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ರಚನೆಗೆ ಮೇಲೆ-1ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಸರ್ಕಾರದ ಅನುಮತಿಯನ್ನು ನೀಡಲಾಗಿದೆ. ಈ ಆದೇಶದಲ್ಲಿ ಶಾಲಾಭಿವೃದ್ಧಿಗಾಗಿ ಸಮಿತಿಯ ಹೆಸರಿನಲ್ಲಿ ಬ್ಯಾಂಕ್‌ನಲ್ಲಿ ಒಂದು ಖಾತೆಯನ್ನು ತೆರೆದು ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಜಂಟಿಯಾಗಿ ಖಾತೆಯನ್ನು ನಿರ್ವಹಿಸತಕ್ಕದ್ದು ಎಂದು ಹಾಗೂ ಇತರೆ ಕಾರ್ಯ ನಿರ್ವಹಣೆಗಳ ಬಗ್ಗೆ ಸೂಚನೆಗಳನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ದಿನಾಂಕ:14/08/2001ರ ಆದೇಶದಲ್ಲಿ ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳಿ ಆಯಾ ಶಾಲೆಗಳ ನೊಂದಾಯಿತ ಪೋಷಕರ ಪಟ್ಟಿಯಿಂದ ಸಂಬಂಧಿಸಿದ ವಿಧಾನ ಸಭಾ ಸದಸ್ಯರು 09 ಜನ ಪೋಷಕ ಪ್ರತಿನಿದಿಗಳನ್ನು ಹಾಗೂ ಅವರಲ್ಲಿ ಒಬ್ಬರನ್ನು ಅಧ್ಯಕ್ಷರನ್ನಾಗಿ ನಾಮ ನಿರ್ದೇಶನ ಮಾಡಲು ಅನುಮತಿಸಲಾಗಿದೆ. ಅದರಂತೆ ಪ್ರೌಢಶಾಲೆಗಳಲ್ಲಿ ವಿಧಾನ ಸಭಾ ಸದಸ್ಯರುಗಳು ಅಧ್ಯಕ್ಷರಾಗಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(3)ರ ದಿನಾಂಕ:11/03/2008ರ ಸರ್ಕಾರದ ಆದೇಶದಲ್ಲಿ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಂಟಿಯಾಗಿ ಬ್ಯಾಂಕಿನಿಂದ ಹಣ ಪಡೆದು ಶಾಲಾ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಿಕೊಂಡು ಹೋಗಲು ಆದೇಶಿಸಲಾಗಿದ್ದು, ತದನಂತರ ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಆದೇಶದಲ್ಲಿ ದಿನಾಂಕ:11/03/2008ರ ಆದೇಶವನ್ನು ಹಿಂಪಡೆದು ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಸೂಚಿಸಿರುವಂತೆ ಅಧ್ಯಕ್ಷರು

ಹಾಗೂ ಕಾರ್ಯದರ್ಶಿಗಳು ಜಂಟಿಯಾಗಿ ಹಣ ಪಡೆದು ಸರ್ಕಾರಿ ಪ್ರೌಢಶಾಲಾ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಿಕೊಂಡು ಹೋಗಲು ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ-5ರ ದಿನಾಂಕ:05/02/2009ರ ನ್ಯಾಯಾಲಯದ ತೀರ್ಪಿನ ಹಿನ್ನೆಲೆಯಂತೆ, ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ಇವರು ಸರ್ಕಾರದ ಆದೇಶ ಸಂಖ್ಯೆ ಇಡಿ 01 ಪಿಬಿಎಸ್ 2001, ದಿನಾಂಕ:16/08/2001ರ ಆದೇಶದಲ್ಲಿ ರಾಜ್ಯದ ಪ್ರತಿಯೊಂದು ಸರ್ಕಾರಿ ಪ್ರೌಢಶಾಲೆಗಳ ಹಾಗೂ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರೌಢಶಾಲಾ ವಿಭಾಗದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳಿಗೆ ಸಂಬಂಧಿಸಿದ ವಿಧಾನ ಸಭಾ ಸದಸ್ಯರು ಅಧ್ಯಕ್ಷರಾಗಿರುತ್ತಾರೆ ಹಾಗೂ ಅವರಿಂದ ಆಯಾ ಪ್ರೌಢಶಾಲೆಯ ನೊಂದಾಯಿತ ಪೋಷಕರ ಪಟ್ಟಿಯಿಂದ ನಾಮ ನಿರ್ದೇಶನ ಮಾಡಲ್ಪಡುವ 09 ಪೋಷಕರ ಪ್ರತಿ ನಿಧಿಗಳು ಸದಸ್ಯರಾಗಿರುತ್ತಾರೆಯೆಂದು ನಿರ್ದಿಷ್ಟ ಪಡಿಸಿ ಆದೇಶಿಸಿರುತ್ತದೆ. ಈ ಕಾರಣಗಳಿಂದ ದಿ:28/04/2001ರ ಆದೇಶದಂತೆ ನೀಡಿರುವ ನಿರ್ದೇಶನಗಳಂತೆ ಪ್ರೌಢಶಾಲೆಗಳಲ್ಲಿ ಎಸ್.ಡಿ.ಎಂ.ಸಿ ರಚನೆ ಹಾಗೂ ಅಧ್ಯಕ್ಷರ ಆಯ್ಕೆ ಮಾಡಬೇಕೇ ಅಥವಾ ದಿ:16/08/2008ರ ಆದೇಶದಂತೆ ಕ್ರಮವಹಿಸಬೇಕೆ ಎಂಬುದರ ಕುರಿತು ಸ್ಪಷ್ಟೀಕರಣ ಕೋರಿರುತ್ತಾರೆ.

ಅದರಂತೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 71 ಎಸ್‌ಓಹೆಚ್ 2019**

**ಬೆಂಗಳೂರು, ದಿನಾಂಕ:07ನೇ ಜನವರಿ 2021**

ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲೆಗಳಲ್ಲಿ ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ ರಚನೆಗೆ ಸಂಬಂಧಿಸಿದಂತೆ, ಸರ್ಕಾರಿ ಪ್ರೌಢಶಾಲೆಗಳ ಹಾಗೂ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರೌಢಶಾಲಾ ವಿಭಾಗದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳಿಗೆ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳನ್ನು ಈ ಕೆಳಕಂಡಂತೆ ಆಯ್ಕೆ ಮಾಡತಕ್ಕದ್ದು.

ಎಸ್.ಡಿ.ಎಂ.ಸಿಯ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳ ಆಯ್ಕೆ:-

1. 09 ಜನ ಪೋಷಕ ಪ್ರತಿನಿಧಿಗಳಿಂದ ಒಬ್ಬರನ್ನು ಎಸ್.ಡಿ.ಎಂ.ಸಿ ಅಧ್ಯಕ್ಷರೆಂದು ಬಹುಮತದಿಂದ ಆರಿಸುವುದು.
2. ಆಯಾಯ ಎಸ್.ಡಿ.ಎಂ.ಸಿ ಪದನಿಮಿತ್ತ ಸದಸ್ಯರಾದ ಆಯಾಯ ಶಾಲೆಯ ಮುಖ್ಯ ಗುರುಗಳು/ ಉಪಪ್ರಾಂಶುಪಾಲರು ಆಯಾಯ ಎಸ್.ಡಿ.ಎಂ.ಸಿಯ ಸದಸ್ಯ ಕಾರ್ಯದರ್ಶಿ ಹಾಗೂ ಖಜಾಂಚಿಗಳಾಗಿರುವುದು.
3. ಉಳಿದಂತೆ, ಸರ್ಕಾರದ ಆದೇಶ ಸಂಖ್ಯೆ: ಇಡಿ 01 ಪಿಬಿಎಸ್ 2001, ದಿನಾಂಕ:25/04/2001ರ ಇತರೆ ಕಾರ್ಯಸೂಚಿಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

7/1/21

(ಬಿ.ಎನ್ ಭಾಗ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಹೆ.ಪ್ರ)
ಶಿಕ್ಷಣ ಇಲಾಖೆ.(ಪ್ರೌಢಶಿಕ್ಷಣ)

7.1.2021

ಇವರಿಗೆ:

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ಪೂರಕ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು.

3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಗುಲ್ಬರ್ಗಾ

4. ನಿರ್ದೇಶಕರು (ಪ್ರಾಥಮಿಕ / ಪ್ರೌಢ ಶಿಕ್ಷಣ/ ಉರ್ದು ಮತ್ತು ಇತರೆ ಅಲ್ಪ ಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ) ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ ನೃಪತುಂಗ ರಸ್ತೆ, ಬೆಂಗಳೂರು.

5. ಜಿಲ್ಲಾ ಪಂಚಾಯತ್‌ನ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು (ಸಂಭಂಧಪಟ್ಟ ಆಯುಕ್ತರ ಮುಖಾಂತರ)

4. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಸಂಬಂಧಪಟ್ಟ ಆಯುಕ್ತರ ಮುಖಾಂತರ)

5. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.

ಸಮಗ್ರ ಶಿಕ್ಷಣ–ಕರ್ನಾಟಕ, ರಾಜ್ಯ ಯೋಜನಾ ನಿರ್ದೇಶಕರ ಕಚೇರಿ

15 JAN 2021